# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1382
2 ಉತ್ತರಿಸುವ ದಿನಾಂಕ : 30.12.2022
3 ಸದಸ್ಯರ ಹೆಸರು : ಶ್ರೀ ಗೋವಿಂದರಾಜು
(ವಿಧಾನಸಭೆಯಿಂದ ಚುನಾಯಿತರಾದವರು)
4 ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಈ ವರ್ಷ ಸುರಿದ ಭಾರಿ ಮಳೆಯಿಂದಾಗಿ ಬಿತ್ತನೆ ಕ್ಷೇತ್ರದಲ್ಲಿ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯ ಅಂತಿಮ ಅಂದಾಜು ವರದಿಯಂತೆ 2021-22 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಪ್ರದೇಶವು 81.67 ಲಕ್ಷ ಹೆಕ್ಟೇರ್ ಗಳಷ್ಟಿದ್ದು, 2022-23 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಗಳ ವಾರಾಂತ್ಯದ ಕ್ರೋಢಿಕೃತ ವರದಿಗಳಂತೆ ಅಂದಾಜು 80.40 ಲಕ್ಷ ಹೆಕ್ಟೇರ್ ರಷ್ಟು ಬಿತ್ತನೆಯಾಗಿರುತ್ತದೆ. ಇದು ಶೇ.1.55 ರಷ್ಟು ಕಡಿಮೆ ಇರುತ್ತದೆ.<br>ಮುಂದುವರೆದು, 2022-23 ನೇ ಮುಂಗಾರು ಹಂಗಾಮಿಗೆ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆರವರಿಂದ ಬೆಳೆ ಸಮೀಕ್ಷೆಯ ಮರುಹೊಂದಾಣಿಕೆ ದತ್ತಾಂಶಗಳ (Reconciled data) ಆಧಾರದ ವರದಿಯನ್ವಯ ಬಿತ್ತನೆ ಪ್ರದೇಶವನ್ನು ಅಂತಿಮಗೊಳಿಸಲಾಗುತ್ತದೆ. |
| ಆ) | ಅತಿವೃಷ್ಟಿಯಿಂದ ಭಾರಿ ಪ್ರಮಾಣದಲ್ಲಿ ಬೆಳೆ ಹಾನಿ ಸಂಭವಿಸಿ, ಆಹಾರ ಧಾನ್ಯಗಳ ಕೊರತೆ ಉಂಟಾಗಿರುವುದು ನಿಜವೇ; | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ರವರಿಗೆ ಸಂಬಂದಿಸಿರುತ್ತದೆ. |

| | | |
|---|---|---|
| ಇ) | ಅತಿವೃಷ್ಟಿಯಿಂದ ಬೆಳೆ ನಷ್ಟವಾಗಿರುವ ಜಿಲ್ಲೆಗಳು ಯಾವುವು; ಹಾಗೂ ಎಷ್ಟು ಪ್ರಮಾಣದಲ್ಲಿ ನಷ್ಟವುಂಟಾಗಿದೆ; | 2022-23 ನೇ ಸಾಲಿನಲ್ಲಿ ಸುರಿದ ಅತಿಯಾದ ಮಳೆಯಿಂದಾಗಿ ಜಂಟಿ ಸಮೀಕ್ಷೆ ವರದಿಗಳಂತೆ ರಾಜ್ಯದ 31 ಜಿಲ್ಲೆಗಳಲ್ಲಿ ಒಟ್ಟು 11.18 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಬೆಳೆಗಳು ನಷ್ಟವಾಗಿರುವ ಬಗ್ಗೆ ವರದಿಯಾಗಿರುತ್ತದೆ.<br>ಜಿಲ್ಲಾವಾರು ಹಾಗೂ ಬೆಳೆವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಈ) | ರಾಜ್ಯದಲ್ಲಿ ಮಳೆಯಿಂದಾಗಿ ಎಷ್ಟು ಜಿಲ್ಲೆಗಳಲ್ಲಿ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿವೆ; ಇದನ್ನು ಸರಿದೂಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಹೆಚ್ಚಾದ ಸತತ ಮಳೆಯಿಂದಾಗಿ ಎಲ್ಲಾ ಜಿಲ್ಲೆಗಳಲ್ಲಿ ಸ್ವಲ್ಪ ಮಟ್ಟಿಗೆ ತಾತ್ಕಾಲಿಕವಾಗಿ ಕೃಷಿ ಚಟುವಟಿಕೆಗಳು ಕುಂಠಿತ/ ತಡವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅಂತಹ ಕೃಷಿ ಬೆಳೆ ಹಾನಿಯಾದ ಪ್ರದೇಶದಲ್ಲಿ ರೂ.1970.69 ಕೋಟಿ ಪರಿಹಾರ (Input subsidy) ರೈತರಿಗೆ ಪಾವತಿ ಮಾಡಲಾಗಿದೆ. |

ಸಂಖ್ಯೆ : AGRI –ACT/293/2022

(ಬಿ.ಸಿ. ಪಾಟೀಲ್)

ಕೃಷಿ ಸಚಿವರು

